# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 939 (428) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾವಣೆಯಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 25.07.2024 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯ ಸರ್ಕಾರವು ಬೆಂಗಳೂರಿನ ಹೊರ ವಲಯದಲ್ಲಿ 2 ಹಂತಗಳಲ್ಲಿ 2000 ಎಕರೆ ಭೂಮಿಯಲ್ಲಿ ಜ್ಞಾನ, ಆರೋಗ್ಯ, ಆವಿಷ್ಕಾರ ಮತ್ತು ಸಂಶೋಧನೆ (KHIR - Knowledge, Healthcare, Innovation & Research) ನಗರವನ್ನು ಸ್ಥಾಪಿಸಲು ಈಗಾಗಲೇ ಯೋಜಿಸಿದ್ದು, ಈ ಯೋಜನೆ ಯಾವ ಹಂತದಲ್ಲಿದೆ; | 2024 - 25ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಈ ಕೆಳಕಂಡಂತೆ ಘೋಷಿಸಲಾಗಿದೆ.<br>"ಬೆಂಗಳೂರು ಸಮೀಪ 2000 ಎಕರೆ ಪ್ರದೇಶದಲ್ಲಿ Knowledge, Healthcare, Innovation and Research City (KHIR) ಅನ್ನು ಅಭಿವೃದ್ಧಿ ಪಡಿಸಲು ಯೋಜಿಸಲಾಗಿದ್ದು, ಈ ಯೋಜನೆಯಿಂದ ಅಂದಾಜು ರೂ. 40,000 ಕೋಟಿ ಬಂಡವಾಳ ಹೂಡಿಕೆಯಾಗಲಿದ್ದು, ಸುಮಾರು 80,000 ಜನರಿಗೆ ಉದ್ಯೋಗ ದೊರೆಯುವ ನಿರೀಕ್ಷೆಯಿದೆ".<br>ಈ ಯೋಜನೆಯ ಅನುಷ್ಠಾನದ ಕುರಿತು ಪರಿಕಲ್ಪನಾ ಟಿಪ್ಪಣಿಯನ್ನು ಸಿದ್ಧಪಡಿಸಲಾಗಿದ್ದು, Detailed Project Report (DPR) ಅನ್ನು ತಯಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಆ | ಸದರಿ ಯೋಜನೆಯಲ್ಲಿ ಯಾವುದಾದರೂ ಸಂಸ್ಥೆ ಹೂಡಿಕೆ ಮಾಡಲು ಆಸಕ್ತಿ ಹೊಂದಿದ್ದಾರೆಯೇ; ಹಾಗಿದ್ದಲ್ಲಿ, ಸದರಿ ಸಂಸ್ಥೆ ಎಷ್ಟು ಹೂಡಿಕೆ ಮಾಡುತ್ತಿದೆ? (ಸದರಿ ಸಂಸ್ಥೆಯ ಪೂರ್ಣ ವಿವರ ನೀಡುವುದು) | ಯೋಜನೆಯು ಪ್ರಾರಂಭಿಕ ಹಂತದಲ್ಲಿದ್ದು, ಅನುಷ್ಠಾನದ ಪೂರ್ಣ ಚಿತ್ರಣವು ಇನ್ನು ಅಂತಿಮಗೊಂಡಿರುವುದಿಲ್ಲ. ಆದುದರಿಂದ, ಈ ಪ್ರಶ್ನೆಯು ಪ್ರಸ್ತುತ ಅನ್ವಯಿಸುವುದಿಲ್ಲ. |

ಸಿಐ 243 ಎಸ್‌ಪಿಐ 2024

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು